ಮೈಸೂರು ವಿಶ್ವವಿದ್ಯಾನಿಲಯ

**ಕಾಲೇಜು ಅಭಿವೃದ್ಧಿ ಮಂಡಳಿ**

ಮೌಲ್ಯಭವನ, ಬೋಗಾದಿ ರಸ್ತೆ, ಮಾನಸಗಂಗೋತ್ರಿ, ಮೈಸೂರು – 570 006, ಕರ್ನಾಟಕ, ಭಾರತ

ಡಾ. ಎಸ್.ಶ್ರೀಕಂಠಸ್ವಾಮಿ
M.Sc., Ph.D.,
ನಿರ್ದೇಶಕರು

ದೂರವಾಣಿ : 0821-2419415 / 306 (ಕಛೇರಿ)
9448275348 (ಮೊಬೈಲ್)
ಇ-ಮೇಲ್ : srikantas@hotmail.com /
cdc@uni-mysore.ac.in

ವಿಷಯ: 2018–19ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ಮುಂದುವರಿಸುವ ಬಗೆಗೆ.

ಉಲ್ಲೇಖ:
1) ಸ್ಥಳೀಯ ವಿಚಾರಣಾ ಸಮಿತಿ ಭೇಟಿ ನೀಡಿದ ದಿನಾಂಕ 23.02.2018
2) ವಿದ್ಯಾವಿಷಯಕ ಪರಿಷತ್ ಸಭೆಯ ನಿರ್ಣಯ ದಿನಾಂಕ 19.06.2018
3) ಸಿಂಡಿಕೇಟ್ ಸಭೆಯ ನಿರ್ಣಯದ ದಿನಾಂಕ 21.06.2018
4) ಕುಲಸಚಿವರ ಆದೇಶ ದಿನಾಂಕ 26.06.2018

* * * * *

**ಸಂಯೋಜನೆ ಮುಂದುವರಿಕೆ ಮಂಜೂರಾತಿ ಆದೇಶ ಸಂಖ್ಯೆ ಸಿಡಿಸಿ–2/46/2018–19 ದಿನಾಂಕ 02.07.18**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000, ಪ್ರಕರಣ 59 (17)ರ ಮೇರೆಗೆ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ಸೂಚಿಸಿರುವ ಷರತ್ತುಗಳಿಗೆ ಒಳಪಟ್ಟು ಮತ್ತು ಅವುಗಳನ್ನು ಕಾರ್ಯಗತಗೊಳಿಸುವಂತೆ ಸೂಚಿಸಿ ಕೆಳಕಂಡ ಕಾಲೇಜಿಗೆ ಪಟ್ಟಿಯಲ್ಲಿ ಸೂಚಿಸಿರುವ ಕೋರ್ಸ್/ವಿಷಯಗಳಿಗೆ 2018–19ನೇ ಸಾಲಿಗೆ ಮಾತ್ರ ಅನ್ವಯವಾಗುವಂತೆ ಕುಲಸಚಿವರ ಆದೇಶದ ಮೇರೆಗೆ ತಾತ್ಕಾಲಿಕ ಸಂಯೋಜನಾ ಮುಂದುವರಿಕೆ ಮಂಜೂರಾತಿ ಆದೇಶ ನೀಡಲಾಗಿದೆ.

**ಕಾಲೇಜಿನ ಹೆಸರು : ಎಂ.ಐ.ಟಿ. ಪ್ರಥಮ ದರ್ಜೆ ಕಾಲೇಜು, ಮೈಸೂರು**

**ಮುಂದುವರಿಕೆ ಸಂಯೋಜನೆ:**

| ಶಿಕ್ಷಣ | ಭಾಷೆಗಳು | ಐಚ್ಛಿಕಗಳು | ವಿಷಯ ಸಮೂಹ | ವಿಭಾಗ | ಒಟ್ಟು ಪ್ರವೇಶ ಮಿತಿ |
|---|---|---|---|---|---|
| ಬಿ.ಬಿ.ಎ. | ಕನ್ನಡ, ಹಿಂದಿ, ಇಂಗ್ಲೀಷ್, ಸಂಸ್ಕೃತ | ವಿಶ್ವವಿದ್ಯಾನಿಲಯದ ನಿಯಮದಂತೆ | - | 01 | 60 |
| ಬಿ.ಸಿ.ಎ. | | ವಿಶ್ವವಿದ್ಯಾನಿಲಯದ ನಿಯಮದಂತೆ | - | 01 | 60 |
| ಬಿ.ಕಾಂ. | | ವಿಶ್ವವಿದ್ಯಾನಿಲಯದ ನಿಯಮದಂತೆ | - | 03 | 180 |

ವಿ.ಸೂ. :

1. ಸಂಯೋಜನಾ ಮಂಜೂರಾತಿ ಆದೇಶದಲ್ಲಿ ನೀಡಿರುವ ಕೋರ್ಸ್/ವಿಷಯ/ವಿಷಯಸಮೂಹಗಳಿಗೆ ನಿಗದಿಪಡಿಸಿರುವ ಪ್ರವೇಶಾತಿ ಸಂಖ್ಯೆಗೆ ಮಾತ್ರ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದು. ಸಂಯೋಜನಾ ಮಂಜೂರಾತಿ ಆದೇಶ ನೀಡದೇ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ಹೊಸದಾಗಿ ಶಿಫಾರಸ್ಸು ಮಾಡದಿರುವ ಕೋರ್ಸ್/ವಿಷಯ/ವಿಷಯ ಸಮೂಹಗಳನ್ನು/ಪ್ರವೇಶಾತಿ ಸಂಖ್ಯೆಯನ್ನು ಪ್ರವೇಶ ಮಾಡಿಕೊಳ್ಳತಕ್ಕದ್ದಲ್ಲ.
2. ಸ್ಥಳೀಯ ವಿಚಾರಣಾ ಸಮಿತಿಯು ನೀಡಿರುವ ವರದಿಯಲ್ಲಿ ಶಿಫಾರಸ್ಸು ಮಾಡಿದ್ದರೂ/ಸರ್ಕಾರದ ಅನುಮೋದನೆ ದೊರೆತಿದ್ದರೂ ವಿಶ್ವವಿದ್ಯಾನಿಲಯದ ಸಂಯೋಜನಾ ಮಂಜೂರಾತಿ ಆದೇಶ ಪಡೆಯದೇ ಯಾವುದೇ ಕೋರ್ಸ್/ ವಿಷಯ/ ವಿಷಯಸಮೂಹ/ ಪ್ರವೇಶಾತಿ ಸಂಖ್ಯೆಗೆ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ. ಅಂತಹ ಸಂದರ್ಭದಲ್ಲಿ [illegible] ಆಗಬಹುದಾದ ತೊಂದರೆಗಳಿಗೆ ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಎಂಬ ಅಂಶವನ್ನು ಗಮನಿಸತಕ್ಕದ್ದು.

ಮು.ತಿ.ನೋ.

PRINCIPAL
M.I.T. FIRST GRADE COLLEGE
#F-29/1, 3rd Stage, Industrial Suburb
Fort Mohalla, Mysuru - 570 024

ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಷರತ್ತುಗಳು:

- Efforts to be made to improve admission by introducing some add-on proficiency courses. / skill development courses along with Bachelors Programmes.
- Academic programmes to be organized to motivate the students and also give them better exposure.

ಸ್ಥಳೀಯ ವಿಚಾರಣಾ ಸಮಿತಿಯು ಸಲ್ಲಿಸಿರುವ ವರದಿಯ ಪ್ರತಿಯನ್ನು ಲಗತ್ತಿಸಲಾಗಿದೆ.

ವಿಶ್ವವಿದ್ಯಾನಿಲಯದ ಶೈಕ್ಷಣಿಕ ವೇಳಾಪಟ್ಟಿಯ ಪ್ರಕಾರ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದು. ವಿಶ್ವವಿದ್ಯಾನಿಲಯ ಹಾಗೂ ಸರ್ಕಾರದ ಷರತ್ತುಗಳನ್ನು 2018-19ನೇ ಸಾಲಿನ ಶೈಕ್ಷಣಿಕ ವರ್ಷದ ಪ್ರಾರಂಭಕ್ಕೆ ಮುನ್ನ ತಪ್ಪದೇ ಪಾಲಿಸುವುದು ಮತ್ತು ಇದರ ಸಂಬಂಧ ಅಗತ್ಯ ದಾಖಲೆಗಳೊಡನೆ ಸಮರ್ಪಕ ಅನುಪಾಲನಾ ವರದಿಯನ್ನು ಒಂದು ತಿಂಗಳೊಳಗಾಗಿ ಕಾಲೇಜು ಅಭಿವೃದ್ಧಿ ಮಂಡಳಿ ಕಛೇರಿಗೆ ತಲುಪಿಸುವುದು. ಪರೀಕ್ಷಾ ನಿಯಮ/ ಪ್ರವೇಶಾತಿ ಮತ್ತು ಮೀಸಲಾತಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ನಿರ್ದೇಶಕ

08.06.18

ಗೆ,

ಪ್ರಾಂಶುಪಾಲರು,
ಎಂ.ಐ.ಟಿ. ಪ್ರಥಮ ದರ್ಜೆ ಕಾಲೇಜು,
#169/2, 3ನೇ ಹಂತ, ಪೋರ್ಟ್ ಮೊಹಲ್ಲಾ,
ಮಾನಂದವಾಡಿ ರಸ್ತೆ, ಮೈಸೂರು

ಪ್ರತಿಗಳು:

1. ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಬಹುಮಹಡಿಗಳ ಕಟ್ಟಡ, ಡಾ. ಬಿ.ಆರ್.ಅಂಬೇಡ್ಕರ್ ರಸ್ತೆ, ಬೆಂಗಳೂರು-560 001.
2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-560 001.
3. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-560 001.
4. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಹುಣಸೂರು ರಸ್ತೆ, ಮೈಸೂರು.
5. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಉಪಕುಲಸಚಿವರು (ಶೈಕ್ಷಣಿಕ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ಕುಲಪತಿಗಳ/ಕುಲಸಚಿವರ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಅಧೀಕ್ಷಕರು, ಸಿಡಿಸಿ/ಕಛೇರಿ ಪ್ರತಿ/ರಕ್ಷಾ ಕಡತಕ್ಕೆ

K Nagegowda

PRINCIPAL
M.I.T. FIRST GRADE COLLEGE
#F-29/1, 3rd Stage, Industrial Suburb
Fort Mohalla, Mysuru - 570 024

ಮೈಸೂರು ವಿಶ್ವವಿದ್ಯಾನಿಲಯ

**ಕಾಲೇಜು ಅಭಿವೃದ್ಧಿ ಮಂಡಳಿ**

ಮೌಲ್ಯಭವನ, ಬೋಗಾದಿ ರಸ್ತೆ, ಮಾನಸಗಂಗೋತ್ರಿ, ಮೈಸೂರು – 570 006, ಕರ್ನಾಟಕ, ಭಾರತ

ಡಾ. ಎಸ್.ಶ್ರೀಕಂಠಸ್ವಾಮಿ
M.Sc., Ph.D.,
ನಿರ್ದೇಶಕರು

ದೂರವಾಣಿ : 0821-2419415 / 306 (ಕಛೇರಿ)
9448275348 (ಮೊಬೈಲ್)
ಇ–ಮೇಲ್ : srikantas@hotmail.com /
cdc@uni-mysore.ac.in


ವಿಷಯ: 2018–19ನೇ ಶೈಕ್ಷಣಿಕ ಸಾಲಿಗೆ ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಲ್ಲಿ ಈಗಾಗಲೇ ಅಸ್ತಿತ್ವದಲ್ಲಿರುವ ಕೋರ್ಸುಗಳಿಗೆ ಹೆಚ್ಚುವರಿ ವಿದ್ಯಾರ್ಥಿ ಪ್ರಮಾಣವನ್ನು ಮಂಜೂರು ಮಾಡುವ ಬಗ್ಗೆ.

ಉಲ್ಲೇಖ: 1) ಮಾನ್ಯ ಕುಲಪತಿಗಳ ಆದೇಶ ದಿನಾಂಕ 06.06.2018
2) ಪ್ರಾಂಶುಪಾಲರು, ಎಂ.ಐ.ಟಿ. ಪ್ರಥಮ ದರ್ಜೆ ಕಾಲೇಜು, ಮೈಸೂರು ಇವರ ಪತ್ರದ ದಿನಾಂಕ 30.07.2018
3) ಸಮಿತಿ ಭೇಟಿ ನೀಡಿದ ದಿನಾಂಕ 30.07.2018

•••••

**ಆದೇಶ ಸಂಖ್ಯೆ ಸಿಡಿಸಿ–3/109/2004–05 ದಿನಾಂಕ 30.07.2018**

ಮೈಸೂರಿನ ಎಂ.ಐ.ಟಿ. ಪ್ರಥಮ ದರ್ಜೆ ಕಾಲೇಜಿನವರು 2018–19ನೇ ಶೈಕ್ಷಣಿಕ ಸಾಲಿಗೆ ಬಿ.ಸಿ.ಎ. ಕೋರ್ಸಿಗೆ ಹೆಚ್ಚುವರಿ ಪ್ರವೇಶಾತಿ ಮಾಡಿಕೊಳ್ಳಲು ಅರ್ಜಿ ಸಲ್ಲಿಸಿ ಸಂಯೋಜನೆ ನೀಡಬೇಕೆಂದು ಕೋರಿದ ಹಿನ್ನೆಲೆಯಲ್ಲಿ 2018–19ನೇ ಶೈಕ್ಷಣಿಕ ಸಾಲಿಗೆ ಮಾತ್ರ ಸಮಿತಿಯು ಭೇಟಿ ನೀಡಿ, ಪರಿಶೀಲನೆ ನಡೆಸಿ ಸಲ್ಲಿಸಿರುವ ವರದಿಯ ಶಿಫಾರಸ್ಸಿನನ್ವಯ ಕೋಷ್ಟಕದಲ್ಲಿ ನಮೂದಿಸಿರುವಂತೆ ಬಿ.ಸಿ.ಎ. ಕೋರ್ಸಿನ ಹೆಚ್ಚುವರಿ ಪ್ರವೇಶಾತಿಗೆ ಸಂಯೋಜನಾ ಮಂಜೂರಾತಿ ಆದೇಶ ನೀಡಲಾಗಿದೆ.

| ಕ್ರ ಸಂ | ಕಾಲೇಜಿನ ಹೆಸರು ಮತ್ತು ವಿಳಾಸ | ಕೋರ್ಸು/ ಕಾಂಬಿನೇಷನ್‌ಗಳ ವಿವರ | ಹಾಲಿ ಇರುವ ವಿದ್ಯಾರ್ಥಿಪ್ರಮಾಣ ಶಾಶ್ವತ / ತಾತ್ಕಾಲಿಕ | ಶೇ.15ರಷ್ಟು ಹೆಚ್ಚುವರಿ ಪ್ರವೇಶಾತಿ ಮಂಜೂರಾತಿ | ಸಮಿತಿ ಭೇಟಿ ನೀಡಿಶಿಫಾರಸ್ಸು ಮಾಡಿದ ಪ್ರವೇಶಾತಿ ಮಂಜೂರಾತಿ | ಒಟ್ಟು ವಿದ್ಯಾರ್ಥಿ ಪ್ರಮಾಣ |
|---|---|---|---|---|---|---|
| 1 | ಎಂ.ಐ.ಟಿ. ಪ್ರಥಮ ದರ್ಜೆ ಕಾಲೇಜು, ಮೈಸೂರು | ಬಿ.ಸಿ.ಎ. | 1 x 60 = 60 (ತಾತ್ಕಾಲಿಕ ಸಂಯೋಜನ) | 09 | 30 | 60+9+30= 99 |

**ಸಮಿತಿ ವಿಧಿಸಿರುವ ಷರತ್ತುಗಳು:**

1. To add 20 more systems to the tab with required facilities.
2. To appoint 02 more qualified faculty for BCA cource.

**ಷರತ್ತುಗಳು:**

1. ನಿಗದಿಗೊಳಿಸಿರುವ ಪ್ರವೇಶ ಮಿತಿಗಿಂತ ಹೆಚ್ಚುವರಿಯಾಗಿ ನೀಡುತ್ತಿರುವ ಪ್ರತಿ ವಿದ್ಯಾರ್ಥಿಯಿಂದ ನಿಗದಿತ ಪ್ರವೇಶ ಶುಲ್ಕಕ್ಕಿಂತ ಹೆಚ್ಚುವರಿಯಾಗಿ ಬಿ.ಸಿ.ಎ. ಕೋರ್ಸಿಗೆ **ರೂ.4,000.00 (ನಾಲ್ಕು ಸಾವಿರ ರೂಪಾಯಿಗಳು ಮಾತ್ರ)** ಕೋರ್ಸಿಗೆ ವಿಶೇಷ ಶುಲ್ಕವಾಗಿಪಡೆದು ಒಟ್ಟಾರೆಯಾಗಿ ರಾಷ್ಟ್ರೀಕೃತ ಬ್ಯಾಂಕಿನಿಂದ ಒಂದು ಡಿಮ್ಯಾಂಡ್ ಡ್ರಾಫ್ಟ್‌ನ್ನು ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರ ಹೆಸರಿನಲ್ಲಿ ಪಡೆದು ವಿದ್ಯಾರ್ಥಿಗಳ ಪ್ರವೇಶಾತಿ ಅನುಮೋದನೆಗಾಗಿ ಪಟ್ಟಿಯನ್ನು ವಿಶ್ವವಿದ್ಯಾನಿಲಯಕ್ಕೆ ಕಳುಹಿಸುವಾಗ ಈ ಹೆಚ್ಚುವರಿ ವಿದ್ಯಾರ್ಥಿಗಳ ಒಂದು ಪ್ರತ್ಯೇಕ ಪಟ್ಟಿಯನ್ನು ಮಾಡಿ ಇದಕ್ಕೆ ಸಂಬಂಧಪಟ್ಟ ಡಿ.ಡಿ. ಹಾಗೂ ಹೆಚ್ಚುವರಿ ಪ್ರವೇಶಾತಿ ಆದೇಶದ ಪ್ರತಿಯನ್ನು ಲಗತ್ತಿಸಿ ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರಿಗೆ ಕಳುಹಿಸತಕ್ಕದ್ದು. ತಪ್ಪಿದಲ್ಲಿ ಪ್ರವೇಶಾತಿಯನ್ನು ಅನುಮೋದಿಸಲಾಗುವುದಿಲ್ಲ.

ಪು.ತಿ.ನೋ.

PRINCIPAL
M.I.T. FIRST GRADE COLLEGE
#F-29/1, 3rd Stage, Indu...
Fort ...

2. ಈ ಹೆಚ್ಚುವರಿ ವಿದ್ಯಾರ್ಥಿ ಪ್ರವೇಶಾತಿ ಅನುಮತಿಯು 2018–19ನೇ ಶೈಕ್ಷಣಿಕ ವರ್ಷಕ್ಕೆ ಮಾತ್ರ ಅನ್ವಯವಾಗುತ್ತದೆ. ಇದು 2019–20ನೇ ಶೈಕ್ಷಣಿಕ ಸಾಲಿಗೆ ಅನ್ವಯಿಸುವುದಿಲ್ಲ.
3. ಈ ಹೆಚ್ಚುವರಿ ವಿದ್ಯಾರ್ಥಿ ಪ್ರವೇಶಾತಿ ಸಂದರ್ಭದಲ್ಲಿ ಮೆರಿಟ್ (ಅರ್ಹತೆ) ಆಧಾರವನ್ನೊಳಗೊಂಡಂತೆ, ರೋಸ್ಟರ್ ಪದ್ಧತಿಗನುಸಾರ ಸೀಟ್‌ನ್ನು ಹಂಚಿಕೆ ಮಾಡತಕ್ಕದ್ದು.
4. ಹೆಚ್ಚುವರಿ ಪ್ರವೇಶಾತಿ ಮಾಡಿಕೊಳ್ಳುವ ಸುತ್ತೋಲೆಯನ್ನು ಕಾಲೇಜಿನ ಪ್ರಕಟಣಾ ಫಲಕದಲ್ಲಿ ಪ್ರಕಟಿಸುವುದು. ಇದನ್ನು ಮ್ಯಾನೇಜ್‌ಮೆಂಟ್ ಕೋಟಾ ಎಂದು ಪರಿಗಣಿಸಬಾರದು ಹಾಗೂ ವಿಶ್ವವಿದ್ಯಾನಿಲಯ ನಿಗದಿಪಡಿಸಿರುವ ಶುಲ್ಕಕ್ಕಿಂತ ಹೆಚ್ಚುವರಿ ಶುಲ್ಕ ವಸೂಲು ಮಾಡತಕ್ಕದ್ದಲ್ಲ. ಇಂತಹ ನಿಯಮಗಳನ್ನು ಉಲ್ಲಂಘಿಸಿದ ಪ್ರಕರಣಗಳು ಗಮನಕ್ಕೆ ಬಂದರೆ ಅಂತಹ ಸಂದರ್ಭದಲ್ಲಿ ನಿಯಮಾನುಸಾರ ಗಂಭೀರ ಕ್ರಮ ಕೈಗೊಳ್ಳಲಾಗುವುದು.
5. ಯಾವುದೇ ಕಾರಣಕ್ಕೂ ಈಗ ಮಂಜೂರು ಮಾಡಿರುವ ಪ್ರವೇಶ ಮಿತಿಗಿಂತ ಹೆಚ್ಚುವರಿಯಾಗಿ ಪ್ರವೇಶಾತಿ ಮಾಡಬಾರದು. ಅಂತಹ ಪ್ರವೇಶಾತಿಯನ್ನು ಅನುಮೋದಿಸುವುದಿಲ್ಲ.
6. **ಹೆಚ್ಚುವರಿ ಪ್ರವೇಶಾತಿ ಪೂರ್ಣಗೊಂಡ ನಂತರ ತಪ್ಪದೇ ಕಾಲೇಜು ಅಭಿವೃದ್ಧಿ ಮಂಡಳಿ ಕಛೇರಿಗೆ ವಿವರ ನೀಡುವುದು.**
7. ವಿಶ್ವವಿದ್ಯಾನಿಲಯದ ಅಧಿಸೂಚನೆಯಲ್ಲಿ ನೀಡಿರುವ ಶೈಕ್ಷಣಿಕ ವೇಳಾಪಟ್ಟಿಯ ಪ್ರಕಾರ ದಂಡ ಶುಲ್ಕವಿಲ್ಲದೆ ಹಾಗೂ ದಂಡಶುಲ್ಕದೊಡನೆ ನಿಗದಿಪಡಿಸಿರುವ ದಿನಾಂಕದೊಳಗೆ ಹೆಚ್ಚುವರಿಯಾಗಿ ನೀಡಿರುವ ಪ್ರವೇಶಾತಿ ಪೂರ್ಣಗೊಳಿಸುವಂತೆ ಆದೇಶಿಸಲಾಗಿದೆ.
8. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾನಿಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
9. ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ. ಕ್ಯಾಪಿಟೇಷನ್ ಶುಲ್ಕ ವಸೂಲು ಮಾಡಿದ ಪಕ್ಷದಲ್ಲಿ, ಸಂಯೋಜನೆ ರದ್ದುಪಡಿಸುವ ಕ್ರಮ ತೆಗೆದುಕೊಳ್ಳಲಾಗುವುದು.
10. ಷರತ್ತುಗಳಿಗೆ ಹೊರತಾಗಿ ಪ್ರವೇಶಾತಿ ಮಾಡಿಕೊಂಡಲ್ಲಿ ಮುಂದಾಗಬಹುದಾದ ಯಾವುದೇ ತೊಂದರೆಗಳಿಗೆ ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರೇ ಸಂಪೂರ್ಣ ಹೊಣೆಗಾರರಾಗಿರುತ್ತಾರೆ.

ಆದೇಶದ ಮೇರೆಗೆ

ನಿರ್ದೇಶಕ

ಗೆ

ಪ್ರಾಂಶುಪಾಲರು,
ಎಂ.ಐ.ಟಿ. ಪ್ರಥಮ ದರ್ಜೆ ಕಾಲೇಜು,
#169/2, 3ನೇ ಹಂತ, ಫೋರ್ಟ್ ಮೊಹಲ್ಲಾ,
ಮಾನಂದವಾಡಿ ರಸ್ತೆ,
ಮೈಸೂರು.

ಪ್ರತಿಗಳು:

1. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
2. ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಉಪಕುಲಸಚಿವರು (ಶೈಕ್ಷಣಿಕ/ ಪರೀಕ್ಷಾಂಗ/ ಸಹಾಯಕ ಕುಲಸಚಿವ, ಶೈಕ್ಷಣಿಕ/ ಸಾಮಾನ್ಯ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಮಾನ್ಯ ಕುಲಪತಿಗಳ/ಕುಲಸಚಿವರ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಕಛೇರಿ ಪ್ರತಿ / ರಕ್ಷಾ ಕಡತ.

K Nage Gowda
M.I.T. FI... COLLEGE
Industrial Suburb
Fort Mohalla, Mysuru - 570 024

# ಮೈಸೂರು ವಿಶ್ವವಿದ್ಯಾನಿಲಯ

## ಕಾಲೇಜು ಅಭಿವೃದ್ಧಿ ಮಂಡಳಿ

ಮೌಲ್ಯಭವನ, ಬೋಗಾದಿ ರಸ್ತೆ, ಮಾನಸಗಂಗೋತ್ರಿ, ಮೈಸೂರು – 570 006, ಕರ್ನಾಟಕ, ಭಾರತ

ಡಾ. ಎಸ್.ಶ್ರೀಕಂಠಸ್ವಾಮಿ
M.Sc., Ph.D.,
ನಿರ್ದೇಶಕರು

ದೂರವಾಣಿ : 0821-2419415 / 306 (ಕಛೇರಿ)
9448275348 (ಮೊಬೈಲ್)
ಇ-ಮೇಲ್ : srikantas@hotmail.com / cdc@uni-mysore.ac.in


ವಿಷಯ: 2018–19ನೇ ಶೈಕ್ಷಣಿಕ ಸಾಲಿನಿಂದ ಮೈಸೂರಿನ ಎಂ.ಐ.ಟಿ ಪ್ರಥಮ ದರ್ಜೆ ಕಾಲೇಜಿನ ಎಂ.ಕಾಂ ಸ್ನಾತಕೋತ್ತರ ಕೋರ್ಸಿಗೆ ಹೊಸದಾಗಿ ಸಂಯೋಜನೆ ನೀಡುವ ಬಗೆಗೆ.

ಉಲ್ಲೇಖ: 1) ಸ್ಥಳೀಯ ತನಿಖಾ ಸಮಿತಿ ಭೇಟಿ ನೀಡಿದ ದಿನಾಂಕ: 22.03.2018
2) ವಿದ್ಯಾವಿಷಯಕ ಪರಿಷತ್ ಸಭೆಯ ನಿರ್ಣಯ ದಿನಾಂಕ 19.06.2018
3) ಸಿಂಡಿಕೇಟ್ ಸಭೆಯ ನಿರ್ಣಯದ ದಿನಾಂಕ 21.06.2018
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಆದೇಶ ಸಂಖ್ಯೆ ಇಡಿ 63 ಯುಎಂವಿ 2018 ದಿನಾಂಕ 18.07.2018
5) ಮಾನ್ಯ ಕುಲಸಚಿವರ ಆದೇಶ ದಿನಾಂಕ 26.06.2018

* * * * *

**ಹೊಸ ಮಾನ್ಯತೆ ಸಂಯೋಜನಾ ಮಂಜೂರಾತಿ ಆದೇಶ ಸಂಖ್ಯೆ ಸಿಡಿಸಿ–01/ಪಿ.ಜಿ/110/2018–19**
**ದಿನಾಂಕ: 01.08.2018**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000, ಪ್ರಕರಣ 59 (11)ರ ಮೇರೆಗೆ ಕರ್ನಾಟಕ ಸರ್ಕಾರದ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು, ಬೆಂಗಳೂರು ಇವರ ಪತ್ರದ ಪ್ರಕಾರ ಉಲ್ಲೇಖ 4ರನ್ವಯ 2018–19ನೇ ಶೈಕ್ಷಣಿಕ ಸಾಲಿನಿಂದ **ಮೈಸೂರಿನ ಎಂ.ಐ.ಟಿ ಪ್ರಥಮ ದರ್ಜೆ ಕಾಲೇಜಿನ ಎಂ.ಕಾಂ ಸ್ನಾತಕೋತ್ತರ ಕೋರ್ಸ್‌ನ್ನು ಹೊಸದಾಗಿ** ಪ್ರಾರಂಭಿಸಲು ಮಾನ್ಯ ಕುಲಸಚಿವರ ಆದೇಶದ ಮೇರೆಗೆ ಹೊಸ ಮಾನ್ಯತೆ ಸಂಯೋಜನಾ ಮಂಜೂರಾತಿ ಆದೇಶ ನೀಡಲಾಗಿದೆ.

| Course | Sections | Total Intake |
|---|---|---|
| M.Com. | 01 | 60 |

**ಸ್ಥಳೀಯ ತನಿಖಾ ಸಮಿತಿ ವಿಧಿಸಿರುವ ಷರತ್ತುಗಳು**

- One faculty with doctoral degree and experience is to be appointed as the co-ordinator for the M.Com programme.
- Three full-time faculty with NET/SLET to be appointed for the M.Com programme on a graded Pay scale.
- Library and computer lab to be set up with an investment of Rs.5 lakhs.

ಸ್ಥಳೀಯ ವಿಚಾರಣಾ ಸಮಿತಿಯು ಸಲ್ಲಿಸಿರುವ ವರದಿಯ ಪ್ರತಿಯನ್ನು ಲಗತ್ತಿಸಲಾಗಿದೆ.

**ಸರ್ಕಾರ ವಿಧಿಸಿರುವ ಷರತ್ತುಗಳು:**

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಮೇಲ್ಕಂಡ ಎಂ.ಕಾಂ ಸ್ನಾತಕೋತ್ತರ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು.
2. ಮೇಲ್ಕಂಡ ಕಾಲೇಜು ವಿಶ್ವವಿದ್ಯಾನಿಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾನಿಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
5. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
6. ಕಾಲೇಜು/ಆಡಳಿತ ಮಂಡಳಿಯು ಶೇ.50ರಷ್ಟು ವಿಶ್ವವಿದ್ಯಾನಿಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾನಿಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು. ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ಶುಲ್ಕ /ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

PRINCIPAL
M.I.T. FIRST GRADE COLLEGE
KF-20/1, [illegible]
Fort Mohalla, Mysuru - 570 024

P.T.O

ವಿಶಾಖ V/s ರಾಜಸ್ಥಾನ ಸರ್ಕಾರ ಮೊಕದ್ದಮೆಯಲ್ಲಿ ಸುಪ್ರೀಂ ಕೋರ್ಟ್ ನೀಡಿರುವ
7. ದಿನಾಂಕ 13.8.1997ರಂದು ವಿಶಾಖ V/s ರಾಜಸ್ಥಾನ ಸರ್ಕಾರ ಮೊಕದ್ದಮೆಯಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (cognizable offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯ ಕ್ರಮ ಜರುಗಿಸತಕ್ಕದ್ದು; ಮುಂದುವರೆದು ಕಾಲೇಜು / ಆಡಳಿತ ಮಂಡಳಿಯು ಸುಪ್ರೀಂ ಕೋರ್ಟ್‌ನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ, ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

8. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸ್‌ನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಳಿಯು ವಿದ್ಯಾರ್ಥಿ / ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.

9. ಕಾಲೇಜಿನ ಆಡಳಿತ ಮಂಡಳಿಯು ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾನಿಲಯ ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

10. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಭೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ;

11. ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.

12. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

13. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.

14. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000 ಪ್ರಕರಣ 59(3) ರಲ್ಲಿನ ನಿಬಂಧನೆಗೊಳಪಟ್ಟಂತೆ ಹಾಗೂ ಸ್ಥಳೀಯ ವಿಚಾರಣಾ ಸಮಿತಿ ವರದಿಯ ಶಿಫಾರಸ್ಸಿನಲ್ಲಿ ಒಳಗೊಂಡಿರುವ ಷರತ್ತುಗಳನ್ನು ಕಡ್ಡಾಯವಾಗಿ ಈ ಶೈಕ್ಷಣಿಕ ಸಾಲಿನಲ್ಲಿಯೇ ಅನುಸರಿಸತಕ್ಕದ್ದು.

15. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ರ ಪ್ರಕರಣ 59(12)ರನ್ವಯ ಸೂಕ್ತ ಆದೇಶಗಳನ್ನು ವಿಶ್ವವಿದ್ಯಾನಿಲಯದಿಂದ ಹೊರಡಿಸತಕ್ಕದ್ದು.

ವಿಶ್ವವಿದ್ಯಾನಿಲಯದ ಶೈಕ್ಷಣಿಕ ವೇಳಾಪಟ್ಟಿಯ ಪ್ರಕಾರ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದು. ವಿಶ್ವವಿದ್ಯಾನಿಲಯ, ಹಾಗೂ ಸರ್ಕಾರದ ಷರತ್ತುಗಳನ್ನು ಕಾರ್ಯಗತ ಮಾಡಲು ಕಾರ್ಯಪ್ರವೃತ್ತರಾಗುವುದು ಹಾಗೂ ಈ ಸಂಬಂಧ ಅಗತ್ಯ ದಾಖಲೆಗಳೊಡನೆ ಅನುಪಾಲನಾ ವರದಿಯನ್ನು ಈ ಪತ್ರ ತಲುಪಿದ ಕೂಡಲೇ ಕಾಲೇಜು ಅಭಿವೃದ್ಧಿ ಮಂಡಳಿ ಕಛೇರಿಗೆ ಕಳುಹಿಸಲು ತಿಳಿಸಲಾಗಿದೆ. ಪರೀಕ್ಷಾ ನಿಯಮ/ ಪ್ರವೇಶಾತಿ / ಮೀಸಲಾತಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

(signature)
ನಿರ್ದೇಶಕ

ಗೆ,

ಪ್ರಾಂಶುಪಾಲರು,
ಎಂ.ಐ.ಟಿ. ಪ್ರಥಮ ದರ್ಜೆ ಕಾಲೇಜು,
#169/2, 3ನೇ ಹಂತ, ಫೋರ್ಟ್ ಮೊಹಲ್ಲಾ,
ಮಾನಂದವಾಡಿ ರಸ್ತೆ,
ಮೈಸೂರು.

**ಪ್ರತಿಗಳು:**

1. ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಬಹುಮಹಡಿಗಳ ಕಟ್ಟಡ, ಡಾ. ಬಿ.ಆರ್.ಅಂಬೇಡ್ಕರ್ ರಸ್ತೆ, ಬೆಂಗಳೂರು-560 001.
2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-560 001.
3. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-560 001.
4. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಜೆ.ಎಲ್.ಬಿ.ರಸ್ತೆ, ಮೈಸೂರು.
5. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಉಪಕುಲಸಚಿವರು (ಶೈಕ್ಷಣಿಕ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ಅಧೀಕ್ಷಕರು, ಸಿಡಿಸಿ/ಕಛೇರಿ ಪ್ರತಿ/ರಕ್ಷಾ ಕಡತಕ್ಕೆ

PRINCIPAL
M.I.T. FIRST GRADE COLLEGE
#F-29/1, 3rd Stage, Industrial Suburb
Fort Mohalla, Mysuru - 570 024